# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:20.03.2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.16 ಜಾಲಹಳ್ಳಿಯಲ್ಲಿ ಶ್ರೀ ಹೆಚ್. ಎಸ್. ದಯಾನಂದ, (ಸ.ಕಾ.ನಿ.ಅ,ಕೆಂಗೇರಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಹಾಜರಿದ್ದವರು:-

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಹೆಚ್. ಎಸ್. ದಯಾನಂದ | ಸ.ಕಾ.ನಿ.ಅ., ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಶ್ರೀ ರಘುನಾಥ ಟಿ. | ಹಿರಿಯ ಆರೋಗ್ಯ ಪರಿವೀಕ್ಷಕರು |
| 3 | ಶ್ರೀ ರವಿಕುಮಾರ್ ಕೆ. ಆರ್. | ಕಿರಿಯ ಆರೋಗ್ಯ ಪರಿವೀಕ್ಷಕರು |
| 4 | ಶ್ರೀ ವೇಣು. | ಕಂದಾಯ ವಸೂಲಿಗಾರರು |
| 5 | ಶ್ರೀಮತಿ ಭಾಗ್ಯಲಕ್ಷ್ಮಿ | ಪಿ.ಎಸ್. ಜಾಲಹಳ್ಳಿ ಪೋಲಿಸ್ ಠಾಣೆ |
| 6 | ಶ್ರೀ ರಾಮಚಂದ್ರ | ಪವರ್‌ಮ್ಯಾನ್ ಬೆಸ್ಕಾಂ |
| 7 | ಶ್ರೀ ಶ್ರೀನಿವಾಸ | ಮೇಲ್ವಿಚಾರಕರು |
| 8 | ಶ್ರೀ ನಾಗರಾಜ್ | ಮೇಲ್ವಿಚಾರಕರು |
| 9 | ಶ್ರೀ ತಿರುಪಾಲ್ | ಮೇಲ್ವಿಚಾರಕರು |
| 10 | ಶ್ರೀ ಕಾಂತರಾಜ್ | ವಾರ್ಡ್ ಮಾರ್ಷಲ್ |
| | ಲಿಂಕ್ ವರ್ಕರ್ಸ್ ಹಾಗೂ ಸಾರ್ವಜನಿಕರು ಹಾಜರಿದ್ದರು | |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

1) ಒಂಟಿ ಮನೆ ಬಗ್ಗೆ:-

ವಾರ್ಡ್ ನಂ.16, ರಲ್ಲಿ ಶ್ರೀ ಶ್ರೀನಿವಾಸ್ ಎಂ. ಬಿನ್ ಮುನಿಚೆನ್ನಪ್ಪ, ನಂ.30/3, 6ನೇ ಅಡ್ಡರಸ್ತೆ, ಜಾಲಹಳ್ಳಿ ಗ್ರಾಮ ಇಲ್ಲಿ ಒಂಟಿ ಮನೆ ನಿರ್ಮಾಣ ಯೋಜನೆ ಅಡಿಯಲ್ಲಿ ಸಲ್ಲಿಸಿರುವ ಮನವಿಯನ್ನು ವಾರ್ಡ್ ಸಮಿತಿಯ ಸಭೆಯಲ್ಲಿ ಶೇ.24.10 ಅಡಿಯಲ್ಲಿ ಮನೆಯನ್ನು ನಿರ್ಮಾಣ ಮಾಡಲು ಒಪ್ಪಿಗೆ ಸೂಚಿಸಲಾಯಿತು.

2) ಘನತ್ಯಾಜ್ಯ ವಿಭಾಗ:-

➤ ಪೌರ ಕಾರ್ಮಿಕರ ವೇತನ ಸಮಸ್ಯೆ ಬಗ್ಗೆ:

ಕಿರಿಯ ಆರೋಗ್ಯ ಪರಿವೀಕ್ಷರು ಮಾತನಾಡಿ, ಪೌರ ಕಾರ್ಮಿಕರ ಬಾಕಿ ವೇತನವು ಇಲ್ಲಿಯವರೆಗೂ ಪಾವತಿಸಿರುವುದಿಲ್ಲ, ಇದರಿಂದಾಗಿ ಪೌರ ಕಾರ್ಮಿಕರ ಹಾಗೂ ಮೇಲ್ವಿಚಾರಕರ ನಡುವೆ ಆಗಾಗ್ಗೆ ಮನಸ್ತಾಪಗಳುಂಟಾಗುತ್ತಿದ್ದು, ವಾರ್ಡ್ ಘನತ್ಯಾಜ್ಯ ನಿರ್ವಹಣೆ ಕೆಲಸದ ಮೇಲೆ ಪರಿಣಾಮ

ಬೀರುತ್ತಿರುವುದು ಸುಮಾರು ತಿಂಗಳುಗಳಿಂದ ಕಂಡುಬಂದಿರುತ್ತದೆ. ಆದ್ದರಿಂದ ಬಾಕಿ ವೇತನ ಪಾವತಿಗೆ ಕ್ರಮ ಕೈಗೊಳ್ಳಬೇಕೆಂದು ಮಾನ್ಯ ಅಧ್ಯಕ್ಷರಲ್ಲಿ ಕೋರಿದರು.

➢ <u>ಪೌರ ಕಾರ್ಮಿಕ ಸಿಬ್ಬಂದಿ ಕೊರತೆ ಬಗ್ಗೆ:</u>

ಪೌರ ಕಾರ್ಮಿಕರು ವಯೋನಿವೃತ್ತಿ ಮತ್ತು ಮರಣ ಹೊಂದಿರುವ ಹಿನ್ನೆಲೆಯಲ್ಲಿ ವಾರ್ಡ್ ಪರಿಮಿತಿಯಲ್ಲಿ ಪೌರ ಕಾರ್ಮಿಕರ ಕೊರತೆ ಉಂಟಾಗಿದ್ದು, ವಾರ್ಡ್ ಪರಿಮಿತಿಯಲ್ಲಿ ಕಸದ ವಿಲೇವಾರಿಗೆ ಸಮಸ್ಯೆ ಉಂಟಾಗುತ್ತಿರುತ್ತದೆ. ಆದ್ದರಿಂದ ತೆರವಾಗಿರುವ ಸ್ಥಾನಕ್ಕೆ ಬದಲೀ ಸಿಬ್ಬಂದಿಯನ್ನು ನಿಯೋಜಿಸಿಕೊಡಲು ಕೋರಿದರು.

➢ ಘನತ್ಯಾಜ್ಯ ಗುತ್ತಿಗೆದಾರರ ಬಗ್ಗೆ:

ವಾರ್ಡ್ ಪರಿಮಿತಿಯಲ್ಲಿ ಸಂಗ್ರಹಿಸುವ ಹಸಿ ತ್ಯಾಜ್ಯ ಸಂಗ್ರಹಣಾ ವಾಹನವು ಮೂರು ದಿನಗಳಿಗೊಮ್ಮೆ ಸಂಸ್ಕರಣ ಘಟಕಕ್ಕೆ ಹೋಗುತ್ತಿದ್ದು, ಅದನ್ನು ಪ್ರತಿನಿತ್ಯವೂ ಸಂಸ್ಕರಣಾ ಘಟಕ್ಕೆ ಕಳುಹಿಸಿಕೊಡಲು ಸೂಕ್ತ ಕ್ರಮವಹಿಸುವ ಕುರಿತು ಸಭೆಯಲ್ಲಿ ಅಧ್ಯಕ್ಷರ ಬಳಿ ಚರ್ಚಿಸಿದರು.

ಈ ಮೇಲ್ಕಂಡ ಅಂಶಗಳ ಬಗ್ಗೆ ಅಧ್ಯಕ್ಷರು ಮಾತನಾಡಿ, ಈ ಮೇಲಿನ ಸಮಸ್ಯೆಗಳು ಕಳೆದ ಮೂರ್ನಾಲ್ಕು ಸಭೆಗಳಲ್ಲಿ ಪದೇ ಪದೇ ಚರ್ಚೆಯಾಗುತ್ತಿದ್ದು, ಯಾವುದೇ ಪರಿಹಾರ ಕಂಡುಬಂದಿರುವುದಿಲ್ಲ. ಆದ್ದರಿಂದ ಸದರಿ ದೂರುಗಳ ಬಗ್ಗೆ ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ವಿಭಾಗ ರವರು ಸೂಕ್ತ ಕ್ರಮಕೈಗೊಳ್ಳಬೇಕೆಂದು ತಿಳಿಸಿದರು. ಹಾಗೂ ಮುಂದಿನ ಸಭೆಯಲ್ಲಿ ಇದರ ಬಗ್ಗೆ ಕೈಗೊಂಡಿರುವ ಕ್ರಮಗಳ ಬಗ್ಗೆ ವಿಸ್ತೃತ ವರದಿ ನೀಡಲು ನಿರ್ದೇಶಿಸಿರುತ್ತಾರೆ. ಇಲ್ಲವಾದಲ್ಲಿ ಇದರ ಬಗ್ಗೆ ಮುಂದಿನ ದಿನಗಳಲ್ಲಿ ಜಂಟಿ ಆಯುಕ್ತರು (ರಾ ರಾ ನಗರ) ರವರ ಗಮನಕ್ಕೆ ತರುವುದಾಗಿ ಹೇಳಿದರು.

**<u>3) ಬೆಸ್ಕಾಂ :</u>**

ಹೆಚ್.ಎಂ.ಟಿ. ಮುಖ್ಯರಸ್ತೆಯಿಂದ ಕಮ್ಮಗೊಂಡನಹಳ್ಳಿಯ ಮುಖ್ಯರಸ್ತೆಯವರೆಗೂ ಹೊಸದಾಗಿ ಲೈನ್ ಅಳವಡಿಸಿದ್ದು, ಮರದ ರೆಂಬೆ ಕೊಂಬೆಗಳನ್ನು ಕಡಿದು ಅದನ್ನು ಅಲ್ಲಿಂದ ತೆರವುಗೊಳಸದೇ ರಸ್ತೆಯ ಬದಿಯಲ್ಲೇ ಬಿಟ್ಟಿರುತ್ತಾರೆ. ಅದನ್ನು ಈ ಕೂಡಲೇ ತೆರವುಗೊಳಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಸಿಬ್ಬಂದಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

**<u>4) ಬಿಡಬ್ಲ್ಯೂಎಸ್ಎಸ್‌ಬಿ:</u>**

ವಾರ್ಡ್ ರಸ್ತೆಗಳಲ್ಲಿರುವ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಿ, ತ್ಯಾಜ್ಯಗಳನ್ನು ವಿಲೇವಾರಿ ಮಾಡದೇ ರಸ್ತೆಯಲ್ಲೇ ಬಿಟ್ಟಿರುವುದು ಕಂಡುಬಂದಿದ್ದು, ಇದರಿಂದಾಗಿ ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಅದನ್ನು ಈ ಕೂಡಲೇ ವಿಲೇವಾರಿ ಮಾಡುವಂತೆ ಹಾಗೂ ಇನ್ನು ಮುಂದೆ ಮ್ಯಾನ್‌ಹೋಲ್‌ಗಳನ್ನು ಸ್ವಚ್ಛಗೊಳಿಸಿದ ತಕ್ಷಣ ತ್ಯಾಜ್ಯವನ್ನು ವಿಲೇವಾರಿ ಮಾಡುವಂತೆ ಸಂಬಂಧಪಟ್ಟ ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳಿಗೆ ಮಾನ್ಯ ಅಧ್ಯಕ್ಷರು ಸೂಚಿಸಿದರು.

5) ಕೋವಿಡ್-19 ಲಸಿಕೆ ಬಗ್ಗೆ:-

ಹಾಲಿ ಪರಿಸ್ಥಿತಿಯಲ್ಲಿ ರಾಜ್ಯದಲ್ಲಿ ಕೊರೊನಾ 2ನೇ ಅಲೆಯು ವ್ಯಾಪಕವಾಗಿ ಹರಡುತ್ತಿದ್ದು. ಇದರ ಬಗ್ಗೆ ಜನರಲ್ಲಿ ಅರಿವು ಮೂಡಿಸುವಂತೆ ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಧ್ಯಕ್ಷರು ಸೂಚಿಸಿದರು. ಹಾಗೂ ಜನನಿಬಿಡ ಪ್ರದೇಶಗಳನ್ನು ಗುರುತಿಸಿ. ಕಡ್ಡಾಯವಾಗಿ ಮಾಸ್ಕ್ ಮತ್ತು ವ್ಯಕ್ತಿಗತ ಅಂತರವನ್ನು ಕಾಯ್ದುಕೊಳ್ಳುವಂತೆ ಜಾಗೃತಿ ಮೂಡಿಸಲು ಸೂಚಿಸಿದರು.

6) ಕಾಮಗಾರಿ ಇಲಾಖೆ:

ಎಂದಿನಂತೆ 'ಸಹಾಯ 2.0' ಕೋಶದಲ್ಲಿ ದಾಖಲಾಗುವ ಸಾರ್ವಜನಿಕರ ದೂರುಗಳನ್ನು ವಿಲೇ ಮಾಡುವ ಬಗ್ಗೆ ಚರ್ಚಿಸಲಾಗಿದ್ದು, ಕಾಮಗಾರಿ ಇಲಾಖೆಗೆ ಸಂಬಂಧಪಟ್ಟ ದೂರುಗಳು ಬಾಕಿ ಇದ್ದು. ಇದರ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ. ದೂರುಗಳನ್ನು ಶೀಘ್ರವಾಗಿ ಪರಿಹರಿಸುವುದಾಗಿ ಸಭೆಗೆ ತಿಳಿಸಿರುತ್ತಾರೆ.

ಕೊನೆಯದಾಗಿ ಅಧ್ಯಕ್ಷರು ಮಾತನಾಡಿ. ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್ ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ. ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ. ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:16

(ಹೆಚ್. ಎಸ್. ದಯಾನಂದ)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:16